# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1277

**ಸದಸ್ಯರ ಹೆಸರು** : ಶ್ರೀ ಶರಣಗೌಡ ಬಯ್ಯಾಪುರ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

**ಉತ್ತರಿಸುವ ದಿನಾಂಕ** : 22.08.2025.

**ಉತ್ತರಿಸುವವರು** : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡ ಇರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ರಾಯಚೂರು ಮತ್ತು ಕೊಪ್ಪಳ ಜಿಲ್ಲೆಯಲ್ಲಿ ಅಂಗನವಾಡಿ ಕೇಂದ್ರಗಳಿಗೆ ಮೂಲಭೂತ ಸೌಕರ್ಯಗಳು ಇಲ್ಲದೇ ಇರುವುದು ಹಾಗೂ ಅಂಗನವಾಡಿ ಕಟ್ಟಡಗಳು ಶಿಥಿಲಾವಸ್ಥೆಗೊಂಡಿರುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು: (ಸಂಪೂರ್ಣ ಮಾಹಿತಿ ಒದಗಿಸುವುದು) | ಮೂಲಭೂತ ಸೌಕರ್ಯಗಳು ಇಲ್ಲದೇ ಇರುವ ಕೇಂದ್ರಗಳಿಗೆ ರಾಜ್ಯ ಸರ್ಕಾರ, ಜಿಲ್ಲಾ ಪಂಚಾಯತ್ ಹಾಗೂ ತಾಲ್ಲೂಕು ಪಂಚಾಯತ್ ಅನುದಾನದಲ್ಲಿ ಮೂಲ ಭೂತ ಸೌಕರ್ಯಗಳನ್ನು ಕಲ್ಪಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಅಂಗನವಾಡಿ ಕಟ್ಟಡಗಳು ಸಂಪೂರ್ಣವಾಗಿ ಶಿಥಿಲಾವಸ್ಥೆಯಲ್ಲಿರುವ ಕಟ್ಟಡಗಳನ್ನು ನೆಲಸಮಗೊಳಿಸಿ ಹೊಸ ಕಟ್ಟಡ ನಿರ್ಮಾಣಕ್ಕೆ ಕೆ.ಕೆ.ಆರ್.ಡಿ.ಬಿ ಅನುದಾನವನ್ನು ಪಡೆಯಲು ಕ್ರಮ ಕೈಗೊಳ್ಳಲಾಗುತ್ತಿದೆ. ಕಟ್ಟಡ ದುರಸ್ಥಿಯಲ್ಲಿದ್ದರೆ ಜಿಲ್ಲಾ ಪಂಚಾಯತ್ ಲಿಂಕ್ ಡಾಕ್ಯೂಮೆಂಟ್‌ನಲ್ಲಿ ದುರಸ್ಥಿ ಮಾಡಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |
| ಇ) | ಅಂಗನವಾಡಿ ಕಾರ್ಯಕರ್ತೆಯರ ಗೌರವಧನ ಹೆಚ್ಚಳದ ಬಗ್ಗೆ ಸಂಪೂರ್ಣ ಮಾಹಿತಿ ಒದಗಿಸುವುದು? | 2025-26ನೇ ಸಾಲಿನ ಆಯವ್ಯಯ ಭಾಷಣದ ಘೋಷಣೆಯಂತೆ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕಿಯರಿಗೆ ಕ್ರಮವಾಗಿ ರೂ.1000/-ಗಳು ಹಾಗೂ ರೂ.750/-ಗಳನ್ನು ಹೆಚ್ಚಿಸಿ ಆದೇಶಿಸಲಾಗಿರುತ್ತದೆ.<br><br>ಸದರಿ ಮೊತ್ತವನ್ನು ಒಳಗೊಂಡಂತೆ ಪ್ರಸ್ತುತ ಅಂಗನವಾಡಿ ಕಾರ್ಯಕರ್ತೆಯರಿಗೆ ಮಾಹೆಯಾನ ರೂ. 12000 ರಿಂದ ರೂ.12500 ರವರೆಗೆ ಹಾಗೂ ಸಹಾಯಕಿಯರಿಗೆ ರೂ.7000/- ಯಿಂದ ರೂ. 7500/- ರಷ್ಟು ಗೌರವಧನವನ್ನು ಪಾವತಿಸಲಾಗುತ್ತಿದೆ. |

**ಸಂಖ್ಯೆ: ಮಮಇ 240 ಐಸಿಡಿ 2025**

**(ಲಕ್ಷ್ಮೀ ಆರ್. ಹೆಬ್ಬಾಳಕರ್)**
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ
ಸಬಲೀಕರಣ ಸಚಿವರು